ಸಾಕ್ಷಿಯನ್ನು ದಿನಾಂಕ**: 09-08-2024** ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**.**

**ಪಾಟೀ ಸವಾಲು :- 10ನೇ ಪ್ರತಿವಾದಿ ಪರ ವಕೀಲರಾದ ಶ್ರೀ ಸಿ.ನಾಗರಾಜು ರವರಿಂದಃ**

ನನಗೆ ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರುವುದಿಲ್ಲ. ನಮ್ಮ ತಂದೆಯ ಆಸ್ತಿಯಲ್ಲಿ ಭಾಗ ಬೇಕು ಎಂದು 10ನೇ ಪ್ರತಿವಾದಿಯನ್ನು ಈ ದಾವೆಯಲ್ಲಿ ಸೇರಿಸಿರುತ್ತೇನೆ. ಸಾಲದ ದಾಖಲೆ ಎಂದು ಹೇಳಿ ನನ್ನಿಂದ ಹಕ್ಕು ಬಿಡುಗಡೆ ಪತ್ರವನ್ನು ಪಡೆದುಕೊಂಡಿರುವ ವಿಚಾರ ಸುಮಾರು 10 ವರ್ಷಗಳ ಹಿಂದೆ ಗೊತ್ತಾಗಿರುತ್ತದೆ. ನನಗೆ ಮೋಸ ಮಾಡಿ ಹಕ್ಕು ಬಿಡುಗಡೆ ಪತ್ರವನ್ನು ಬರೆಸಿಕೊಂಡಿರುವ 1 ಮತ್ತು 2ನೇ ಪ್ರತಿವಾದಿಗಳ ವಿರುದ್ಧ ಯಾವುದೇ ಕಾನೂನು ಕ್ರಮ ತೆಗೆದುಕೊಂಡಿರುವುದಿಲ್ಲ. 1 ಮತ್ತು 2ನೇ ಪ್ರತಿವಾದಿಗಳಿಂದ ರೂ.5,00,000/- ಹಣವನ್ನು ಪಡೆದು ದಾವಾ ಆಸ್ತಿಗಳ ಮೇಲಿನ ಹಕ್ಕನ್ನು ಕಾನೂನು ಪ್ರಕಾರವಾಗಿ 1 ಮತ್ತು 2ನೇ ಪ್ರತಿವಾದಿಗಳ ಪರವಾಗಿ ಬಿಟ್ಟುಕೊಟ್ಟಿದ್ದೇನೆ ಎಂದರೆ ಸುಳ್ಳು.

12 ರಿಂದ 16ನೇ ದಾವಾ ಆಸ್ತಿಗಳು 10ನೇ ಪ್ರತಿವಾದಿಯಾದ ಶ್ರೀಮತಿ ಲಿಲಾವತಿಯ ಸ್ವಯಾರ್ಜಿತ ಆಸ್ತಿಗಳು ಎಂದರೆ ಸರಿಯಲ್ಲ. 12 ರಿಂದ 16ನೇ ದಾವಾ ಆಸ್ತಿಗಳ ಮೇಲೆ ನನಗೆ ಯಾವುದೇ ಹಕ್ಕಿಲ್ಲ ಎಂದರೆ ಸರಿಯಲ್ಲ. 12 ರಿಂದ 16ನೇ ದಾವಾ ಆಸ್ತಿಗಳನ್ನು ನೋಂದಾಯಿತ ಖರೀದಿ ಪತ್ರದ ಮುಖಾಂತರ ಖರೀದಿ ಮಾಡಿದ್ದಾಳೆ ಎಂದರೆ ಸಾಕ್ಷಿಗೆ ಸಾಕಷ್ಟು ಕಾಲಾವಕಾಶ ನೀಡಿದರೂ ಸಹ ಮೌನವಾಗಿ ನಿಂತಿರುತ್ತಾರೆ. 10ನೇ ಪ್ರತಿವಾದಿಯ ಹೆಸರಿಗೆ ದಾಖಲಾಗಿರುವ ಪಹಣಿ ಪತ್ರಿಕೆಗಳನ್ನು ಯಾವುದೇ ನ್ಯಾಯಾಲಯದಲ್ಲಿ ಪ್ರಶ್ನಿಸಿರುವುದಿಲ್ಲ. ಆದರೂ ಸಹ 10ನೇ ಪ್ರತಿವಾದಿಗೆ ತೊಂದರೆ ನೀಡುವ ಸಲುವಾಗಿ ಮತ್ತು ಅಕ್ರಮ ಪಾಯ್ದೆ ಪಡೆಯುವ ಸಲುವಾಗಿ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿರುತ್ತಾರೆ,**

**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ದೇವನಹಳ್ಳಿ.**